# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ ಬುಡ್ನಾ ಸಿದ್ದಿ ರವರ ನಿಯಮ 72 ರ ಗಮನ ಸೆಳೆಯುವ ಪ್ರಶ್ನೆಗೆ ಉತ್ತರ.

**ಪ್ರಶ್ನೆ:**

ಉತ್ತರ ಕನ್ನಡ ಜಿಲ್ಲೆಯವರಾದ ಪದ್ಮಶ್ರೀ ಪುರಸ್ಕೃತರಾದ ದಿ. ಶ್ರೀಮತಿ ಸುಕ್ರಿ ಬೊಮ್ಮಗೌಡ ಮತ್ತು ದಿ. ಶ್ರೀಮತಿ ತುಳಸಿ ಗೌಡ ಇವರ ಸ್ಮರಣಾರ್ಥ ಉತ್ತರ ಕನ್ನಡ ಜಿಲ್ಲೆಯಲ್ಲಿ ಸ್ಮಾರಕ ನಿರ್ಮಾಣ ಮಾಡುವ ಕುರಿತು ಸಾರ್ವಜನಿಕ ಮಹತ್ವದ ವಿಷಯವನ್ನು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ ಸಂಸ್ಕೃತಿ ಇಲಾಖೆ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಹೇಳಿಕೆ:**

**ಶ್ರೀಮತಿ ಸುಕ್ರಿ ಬೊಮ್ಮ ಗೌಡ**

ಪದ್ಮಶ್ರೀ ಸುಕ್ರಿ ಬೊಮ್ಮ ಗೌಡ ಇವರು ಉತ್ತರ ಕನ್ನಡ ಜಿಲ್ಲೆಯ ಅಂಕೋಲದ ಬಡಿಗೇರಿಯ ಹಾಲಕ್ಕಿ ಒಕ್ಕಲಿಗ ಬುಡಕಟ್ಟು ಜನಾಂಗದಲ್ಲಿ ಜನಿಸಿರುತ್ತಾರೆ. ಇವರು ಪ್ರಸಿದ್ಧ ಜಾನಪದ ಗಾಯಕಿಯಾಗಿದ್ದು, ಹಾಲಕ್ಕಿ ಒಕ್ಕಲಿಗ ಬುಡಕಟ್ಟಿನ ಸಾಂಪ್ರದಾಯಿಕ ಸಂಗೀತ ಮತ್ತು ಹಾಡುಗಳನ್ನು ಸಂರಕ್ಷಿಸಲು ಶ್ರಮಿಸಿರುವ ಮೇರೆಗೆ ಇವರನ್ನು "ಹಾಲಕ್ಕಿಯ ನೈಟಿಂಗೇಲ್" ಎಂದು ಕರೆಯುತ್ತಾರೆ.

1988ರಲ್ಲಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ನಾಡೋಜ ಪ್ರಶಸ್ತಿ ಮತ್ತು ಜಾನಪದ ಶ್ರೀ ಪ್ರಶಸ್ತಿ ಸೇರಿದಂತೆ ಹಲವಾರು ರಾಜ್ಯ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗಿದೆ.

ಇವರ ಅನುಪಮ ಸೇವೆಯನ್ನು ಗುರುತಿಸಿ 2017ರಲ್ಲಿ ಪದ್ಮಶ್ರೀ ಪ್ರಶಸ್ತಿ ಗೌರವಕ್ಕೆ ಪಾತ್ರರಾಗಿರುತ್ತಾರೆ.

**ಶ್ರೀಮತಿ ತುಳಸಿಗೌಡ**

ಪದ್ಮಶ್ರೀ ತುಳಸಿ ಗೌಡ ಇವರು ಅಂಕೋಲಾ ತಾಲೂಕಿನ ಹೊನ್ನಳ್ಳಿ ಗ್ರಾಮದ ಹಾಲಕ್ಕಿ ಬುಡಕಟ್ಟು ಕುಟುಂಬದಲ್ಲಿ ಜನಿಸಿದ್ದು, ಹೊನ್ನಾಳಿ, ಮಸ್ತಿಗಟ್ಟ, ಹೆಗ್ಗೂರು, ಹೊಲಿಗೆ, ವಜ್ರಹಳ್ಳಿ, ದೊಂಗ್ರಿ, ಕಲ್ಲೇಶ್ವರ, ಅಡಗೂರು, ಅಗಸೂರು, ಸಿರಗುಂಜಿ, ಎಲೊಗಡ್ಡೆಗಳ ಖಾಲಿ ಭೂಮಿಯಲ್ಲಿ ಅರಣ್ಯ ಇಲಾಖೆ ಮೂಲಕ ಸುಮಾರು 30 ಸಾವಿರಕ್ಕೂ ಅಧಿಕ ಸಸಿಗಳನ್ನು ನೆಡುವ ಮೂಲಕ ತಮ್ಮ ಇಡೀ ಜೀವನವನ್ನು ಮುಡುಪಾಗಿಟ್ಟಿರುತ್ತಾರೆ.

1986ರಲ್ಲಿ ಕೇಂದ್ರ ಸರ್ಕಾರದ ಪ್ರಿಯದರ್ಶಿನಿ ವೃಕ್ಷಮಿತ್ರ ಪ್ರಶಸ್ತಿ, 1999 ರಲ್ಲಿ ರಾಜ್ಯೋತ್ಸವ ಪ್ರಶಸ್ತಿ ಹಾಗೂ 2020ರಲ್ಲಿ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಪದ್ಮಶ್ರೀ ಪುರಸ್ಕೃತರಾದ ಉತ್ತರ ಕನ್ನಡ ಜಿಲ್ಲೆಯ ಶ್ರೀಮತಿ ಸುಕ್ರಿ ಬೊಮ್ಮುಗೌಡ ಮತ್ತು ಶ್ರೀಮತಿ ತುಳಸಿಗೌಡ, ಸ್ಮಾರಕ ನಿರ್ಮಿಸುವ ಪ್ರಸ್ತಾವನೆಯು ಇಲಾಖೆಗೆ ಸ್ವೀಕೃತವಾಗಿರುವುದಿಲ್ಲ. ಪ್ರಸ್ತಾವನೆ ಸ್ವೀಕೃತವಾದಲ್ಲಿ ನಿಯಮಾನುಸಾರ ಪರಿಶೀಲಿಸಲಾಗುವುದು.

ಸಂಖ್ಯೆ: ಕಸಂವಾ 98 ಕವಿಸ 2025

**(ಶಿವರಾಜ್ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು